ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.19/2019-20 ದಿನಾಂಕ: 02-02-2021

## ಅಧಿಸೂಚನೆ

ಕರ್ನಾಟಕದ ವಸತಿ ಶಾಲೆಗಳಲ್ಲಿ / ಸಂಸ್ಥೆಗಳಲ್ಲಿ, 2020ನೇ ಸಾಲಿಗೆ 6ನೇ ತರಗತಿಗೆ ದಾಖಲಾತಿ ಪಡೆಯಲು ಪ್ರವೇಶ ಪರೀಕ್ಷೆಯನ್ನು ದಿನಾಂಕ 24-02-2021 ರಂದು ನಡೆಸಲು ಪರಿಷ್ಕೃತ ವೇಳಾಪಟ್ಟಿ.

ಕರ್ನಾಟಕದ ರಾಜ್ಯದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ / ಕಿತ್ತೂರು ರಾಣಿ ಚೆನ್ನಮ್ಮ / ಏಕಲವ್ಯ ಮಾದರಿ / ಅಟಲ್ ಬಿಹಾರಿ ವಾಜಪೇಯಿ / ಶ್ರೀಮತಿ ಇಂದಿರಾ ಗಾಂಧಿ / ಡಾ:ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಗಳಲ್ಲಿ 2020ನೇ ಸಾಲಿಗೆ 6ನೇ ತರಗತಿಗೆ ದಾಖಲಾತಿ ಪಡೆಯಲು, ರಾಜ್ಯದಾದ್ಯಂತ ಏಕಕಾಲದಲ್ಲಿ ರಾಜ್ಯ ಮಟ್ಟದ ಪ್ರವೇಶ ಪರೀಕ್ಷೆಯನ್ನು ದಿನಾಂಕ 06-05-2020 ರಂದು ನಡೆಸಲು ನಿಗದಿಪಡಿಸಲಾಗಿತ್ತು. ಕೋವಿಡ್-19 ರ ಹಿನ್ನಲೆಯಲ್ಲಿ ಸರ್ಕಾರದ ಸೂಚನೆಯಂತೆ ಸದರಿ ಪರೀಕ್ಷೆಯನ್ನು ಅನಿರ್ದಿಷ್ಟಾವಧಿಗೆ ಮುಂದೂಡಲಾಗಿತ್ತು.

ಪ್ರಸ್ತುತ ದಿನಾಂಕ 24-02-2021 ರಂದು ಮಧ್ಯಾಹ್ನ 2.30 ರಿಂದ 4.30 ರ ವರೆಗೆ ಈ ಕೆಳಗಿನ ಪರಿಷ್ಕೃತ ವೇಳಾಪಟ್ಟಿಯಂತೆ ನಡೆಸಲು ನಿರ್ಧರಿಸಲಾಗಿದೆ.

ಪರಿಷ್ಕೃತ ವೇಳಾಪಟ್ಟಿ

| ದಿನಾಂಕ | ದಿನ | ಸಮಯ | ಅಂಕಗಳು |
|---|---|---|---|
| 24-02-2021 | ಬುಧವಾರ | ಮಧ್ಯಾಹ್ನ 2.30 ರಿಂದ 4.30 ರ ವರೆಗೆ | 100 |
| ಅಭ್ಯರ್ಥಿಗಳು ಮಧ್ಯಾಹ್ನ 1.30 ರೊಳಗಾಗಿ ಪರೀಕ್ಷಾ ಕೇಂದ್ರಗಳನ್ನು ತಲುಪುವಂತೆ ವ್ಯವಸ್ಥೆ ಮಾಡಿಕೊಳ್ಳುವುದು ಸೂಕ್ತವಾಗಿರುತ್ತದೆ. | | | |
| ದಿನಾಂಕ 15-02-2021 ರ ಬೆಳಿಗ್ಗೆ 11.00 ರಿಂದ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು. | | | |

ಅಭ್ಯರ್ಥಿಗಳು ಕಡ್ಡಾಯವಾಗಿ ಮಾಸ್ಕ್ ಧರಿಸಿ ಪರೀಕ್ಷೆಗೆ ಹಾಜರಾಗಬೇಕು. ಅಭ್ಯರ್ಥಿಗಳು ನೀಲಿ ಅಥವ ಕಪ್ಪು ಶಾಯಿಯ ಬಾಲ್ ಪಾಯಿಂಟ್ ಪೆನ್‌ನ್ನು ಮಾತ್ರ ಉಪಯೋಗಿಸಬೇಕು. ಅಭ್ಯರ್ಥಿಗಳು ಪರೀಕ್ಷೆಯ ಪ್ರವೇಶ ಪತ್ರವನ್ನು (Hall Ticket) ತಾವು ಅರ್ಜಿ ಸಲ್ಲಿಸಿದ ವಸತಿ ಶಾಲೆಯ ಪ್ರಾಂಶುಪಾಲರ ಮುಖಾಂತರ ಪಡೆದು, ಪ್ರವೇಶ ಪತ್ರದಲ್ಲಿ ನೀಡಿರುವ ಸೂಚನೆಗಳನ್ನು ಜಾಗರೂಕತೆಯಿಂದ ಓದಿಕೊಂಡು ನಿಗದಿತ ದಿನಾಂಕ ಮತ್ತು ಸಮಯಕ್ಕೆ ಸರಿಯಾಗಿ ಸಂಬಂಧಿಸಿದ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆಯನ್ನು ತೆಗೆದುಕೊಳ್ಳಲು ಸೂಚಿಸಿದೆ.

ಸಹಿ/-
ಕಾರ್ಯನಿರ್ವಾಹಕ ನಿರ್ದೇಶಕರು.
ಕರ್ನಾಟಕ ಪರೀಕ್ಷಾ ಪ್ರಾಧಿಕಾರ.

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru – 560 012.
Phone: 080-2356 4583, 2336 1786, Fax: 080-2346 1576
e-mail : keauthority-ka@nic.in Website : http://kea.kar.nic.in